ಇ) ಮೇಲ್ಕಂಡ ಕೊಳವೆ ಬಾವಿಯಿಂದ ಗಡಂಪಲ್ಲಿ ಗ್ರಾಮಕ್ಕೆ ನೀರು ಸರಬರಾಜು ಮಾಡುವ ಕಾಮಗಾರಿಯನ್ನು 2003–04ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದ್ದು, ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ರೋಣ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಯೋಜನೆ

4077 (4565) : ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ (ರೋಣ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ;

ಆ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇದೆ;

ಇ) ಉಪನ್ಯಾಸಕರ ಕೊರತೆಗೆ ಕಾರಣವೇನು;

ಈ) ಗದಗ ಜಿಲ್ಲೆ ರೋಣ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಉ) ಉಪನ್ಯಾಸಕರ ಕೊರತೆ ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) 684

ಆ) 495

ಇ) ಉಪನ್ಯಾಸಕರ ನಿವೃತ್ತಿ ಮತ್ತು ಬಡ್ತಿಗಳಿಂದ ಹೆಚ್ಚಿನ ಉಪನ್ಯಾಸಕರ ಹುದ್ದೆಗಳು ಖಾಲಿ ಆಗಿವೆ.

ಈ) ಹೌದು.

ಉ) ಕಾರ್ಯಭಾರ ಕಡಿಮೆ ಇರುವ ಹತ್ತಿರದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಂದ ಉಪನ್ಯಾಸಕರುಗಳನ್ನು ವಾರದಲ್ಲಿ 3 ದಿನ ನಿಯೋಜಿಸುವ ಮೂಲಕ ಕಾರ್ಯಭಾರವನ್ನು ನೀಗಿಸಲು ಜಿಲ್ಲಾ ಉಪನಿರ್ದೇಶಕರಿಗೆ ಪಹಿಸಲಾಗಿದೆ. ಬಡ್ತಿಗೆ ಮೀಸಲಾದ ಹುದ್ದೆಗಳನ್ನು ಅರ್ಹ ಪ್ರೌಢಶಾಲಾ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡುವ ಮೂಲಕ ತುಂಬಲು ಕ್ರಮಕೈಗೊಳ್ಳಲಾಗುತ್ತಿದೆ. ಕರ್ನಾಟಕ ನಾಗರೀಕ ಸೇವೆಗಳು (ಅಂಶಕಾಲಿಕ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವ ವ್ಯಕ್ತಿಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿಲೀನಗೊಳಿಸುವಿಕೆ) (ವಿಶೇಷ) ನಿಯಮಾವಳಿಗಳು 1997, ದಿನಾಂಕ: 26.7.2003 ರಂದು ಜಾರಿಗೆ ಬಂದಿದ್ದು, ಆ ನಿಯಮಾವಳಿಗಳ ಪ್ರಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅರ್ಹ ಅಂಶಕಾಲಿಕ ಉಪನ್ಯಾಸಕರನ್ನು ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ನೇಮಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಆಯುರ್ವೇದ ಪದವಿಗೆ ಮಾನ್ಯತೆ ಇಲ್ಲದೇ ಇರುವುದು

4091 (4717) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯದಿಂದ ಇಲ್ಲಿಯವರೆಗೆ ಎಷ್ಟು ಜನ ಆಯುರ್ವೇದದ ಪದವಿ (ಬಿ.ಎ.ಎಂ.ಎಸ್.)ಗಳನ್ನು ಪಡೆದಿದ್ದಾರೆ.

ಆ) ಈ ಪದವಿಯನ್ನು ಕೇಂದ್ರದ ಆಯುರ್ವೇದ ಪರಿಷತ್ತು ಮಾನ್ಯತೆ ಮಾಡಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಪದವಿಯನ್ನು ಮಾನ್ಯತೆ ಮಾಡದೇ ಇರುವುದರಿಂದ ಈ ಪದವೀಧರರು ಸರ್ಕಾರಿ ನೌಕರಿ ಪಡೆಯಲು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಶ್ರೀ ಎ.ಬಿ. ಮಾಲಕ ರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ) 738

ಆ) ಬಂದಿದೆ.

ಇ) ಬಂದಿದೆ.

ಈ) ಇಂಡಿಯನ್ ಮೆಡಿಸಿನ್ ಸೆಂಟ್ರಲ್ ಕೌನ್ಸಿಲ್ ಆಕ್ಟ್ 1970ರ 2ನೇ ಷೆಡ್ಯೂಲ್‌ನಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಿಂದ ಪಡೆದಿರುವ ಬಿಎಎಂ.ಎಸ್ ಪದವಿಯನ್ನು ಸೇರ್ಪಡಿಸಲು ಕೆಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುತ್ತಿದೆ. ಅಲ್ಲಿಂದ ಅನುಮತಿಯನ್ನು ನಿರೀಕ್ಷಿಸಲಾಗಿದೆ.

ಕೇಂದ್ರದ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಿಂದ ಬಿಡುಗಡೆಯಾದ ಹಣ

4096 (4530) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ ಹಾಗೂ ಈ ವರ್ಷ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಾಜ್ಯಕ್ಕೆ ರಸ್ತೆ ಕುಡಿಯುವ ನೀರು ಹಾಗೂ ಉಳಿದ ಅಭಿವೃದ್ಧಿ ಕೆಲಸಗಳಿಗಾಗಿ ಎಷ್ಟು ಹಣ ಬಿಡುಗಡೆ ಮಡಲಾಗಿತ್ತು? ಎಷ್ಟು ಹಣ ಖರ್ಚಾಗಿರುವುದು; ಜಿಲ್ಲಾವಾರು ಮಾಹಿತಿ ನೀಡುವುದು;

ಆ) ಕೇಂದ್ರವು ರಾಜ್ಯ ಸರ್ಕಾರಕ್ಕೆ ಬಿಡುಗಡೆ ಮಾಡಿದ ಹಣವನ್ನು ರಾಜ್ಯ ಸರ್ಕಾರದವರು ಖರ್ಚು ಮಾಡದೇ ಇರುವ ಸಂಗತಿ ನಿಜವೇ?

ಇ) ಹಾಗಿದ್ದಲ್ಲಿ ಬಿಡುಗಡೆ ಮಾಡಿದ ಪೂರ್ಣ ಹಣವನ್ನು ಖರ್ಚು ಮಾಡಲು ರಾಜ್ಯವು ಕ್ರಮಕೈಗೊಳ್ಳಲಾಗುವುದೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಈ ಕುರಿತು ಜಿಲ್ಲಾವಾರು ಬಿಡುಗಡೆಯಾದ ಹಣದ ವಿವರವನ್ನು ಅನುಬಂಧ–1 ರಲ್ಲಿ ಹಾಗೂ ಜಿಲ್ಲಾವಾರು ಖರ್ಚಾಗಿರುವ ಹಣದ ವಿವರನ್ನು ಅನುಬಂಧ–2 ರಲ್ಲಿ ಒದಗಿಸಲಾಗಿದೆ.

ಆ) ಕೇಂದ್ರವು ರಾಜ್ಯ ಸರ್ಕಾರಕ್ಕೆ ಬಿಡುಗಡೆ ಮಾಡಿದ ಹಣವನ್ನು ರಾಜ್ಯ ಸರ್ಕಾರವು ಖರ್ಚು ಮಾಡಲಾಗುತ್ತಿದೆ.

ಇ) ಕೇಂದ್ರವು ರಾಜ್ಯ ಸರ್ಕಾರಕ್ಕೆ ಬಿಡುಗಬಡೆ ಮಾಡಿದೆ ಪೂರ್ಣ ಹಣವನ್ನು ರಾಜ್ಯ ಸರ್ಕಾರವು ಖರ್ಚು ಮಾಡಲಾಗುತ್ತಿದೆ.